REGISTERED WITH RNI NEW DELHI REG. N0.69683/97-Postal Registration No.RNP/KA/BGS/2259/2024-2026
Office of Posting: Bangalore PSO, Bangalore - 560026.; Date of Posting & Publishing Every Wednesday; Price Rs. 2 (Pages-8)

ಪಟ್ಟಣ ಸಹಕಾರ ಬ್ಯಾಂಕುಗಳ

# ವಾರ್ತಾ ಪತ್ರಿಕೆ

ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಅಧಿಕೃತ ಕನ್ನಡ ವಾರಪತ್ರಿಕೆ

ಸಂಪುಟ : 32 । ಸಂಚಿಕೆ : 24 । 17 ಸೆಪ್ಟೆಂಬರ್ 2025 । ಬುಧವಾರ । ಪುಟಗಳು : 8 । ಬೆಲೆ : 2/-

## ರಡ್ಡಿ ಸಹಕಾರ ಬ್ಯಾಂಕಿನ ಮುದ್ದೇಬಿಹಾಳ ಶಾಖೆಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ



**ಮುದ್ದೇಬಿಹಾಳ :** ದಿನಾಂಕ : 01.09.2025 ರಂದು ಧಾರವಾಡ ರಡ್ಡಿ ಸಹಕಾರ ಬ್ಯಾಂಕಿನ ಮುದ್ದೇಬಿಹಾಳ ಶಾಖೆಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ ಅಧ್ಯಕ್ಷರಾದ ಶ್ರೀ ಎಚ್.ಕೆ. ಪಾಟೀಲರು ಮಾತನಾಡಿ, ರಡ್ಡಿ ಸಹಕಾರ ಬ್ಯಾಂಕ ಸುಮಾರು 111 ವರ್ಷಗಳ ಇತಿಹಾಸ ಹೊಂದಿದ್ದು, ಲಕ್ಷಾಂತರ ಬಡವರಿಗೆ ಆರ್ಥಿಕ ಸಹಕಾರ ನೀಡಿ ಬೆಳೆದು ಬಂದಿದೆ. ಇದೀಗ ಹೊಸ ಕಟ್ಟಡ ನಿರ್ಮಿಸಿದ್ದು, ಒಳ್ಳೆಯ ಬೆಳವಣಿಗೆ. ಇನ್ನಷ್ಟು ಜನರಿಗೆ ಈ ಬ್ಯಾಂಕ್ ಅನುಕೂಲವಾಗುವಂತೆ ಶ್ರಮಿಸಬೇಕು ಎಂದರು.

ಸಮಾರಂಭದ ದಿವ್ಯ ಸಾನಿಧ್ಯವನ್ನು ಮಹಾಯೋಗಿ ವೇಮನ ಸಂಸ್ಥಾನ ಮಠದ ಶ್ರೀ ವೇಮನಾನಂದ ಮಹಾಸ್ವಾಮೀಜಿಗಳು, ವಿಜಯಮಹಾಂತೇಶ್ವರ ಸಂಸ್ಥಾನ ಮಠದ ಶ್ರೀ ಗುರುಮಹಾಂತ ಸ್ವಾಮೀಜಿಗಳು ವಹಿಸಿದ್ದರು.

ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎಂ.ಬಿ. ಪಾಟೀಲ, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ಶ್ರೀ ಈಶ್ವರ ಬಿ.ಖಂಡ್ರೆ, ಸಂಸದ ಶ್ರೀ ರಮೇಶ ಜಿಗಜಿಣಗಿ, ಶಾಸಕ ಹಾಗೂ ಕೆಎಸ್‌ಡಿಎಲ್ ಅಧ್ಯಕ್ಷ ಶ್ರೀ ಸಿ.ಎಸ್. ನಾಡಗೌಡ, ರಡ್ಡಿ ಸಹಕಾರ ಬ್ಯಾಂಕಿನ ಅಧ್ಯಕ್ಷ ಕೆ.ಎಲ್. ಪಾಟೀಲ, ಉಪಾಧ್ಯಕ್ಷ ಶ್ರೀ ಎಸ್.ಎನ್. ನಾಡಗೌಡ, ಬ್ಯಾಂಕಿನ ಎಲ್ಲಾ ನಿರ್ದೇಶಕ ಮಂಡಳಿ ಸದಸ್ಯರು, ಮುದ್ದೇಬಿಹಾಳ ಶಾಖಾ ಸಲಹಾ ಸಮಿತಿ ಅಧ್ಯಕ್ಷ ರಾಯನಗೌಡ ಎಮ್. ಚಿತ್ತಾಪುರ ಮತ್ತಿತರರು ಉಪಸ್ಥಿತರಿದ್ದರು.

## ಉಪರಾಷ್ಟ್ರಪತಿಯಾಗಿ ಸಿ.ಪಿ. ರಾಧಾಕೃಷ್ಣನ್ ಪ್ರಮಾಣವಚನ ಸ್ವೀಕಾರ

**ನವದೆಹಲಿ:** ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ ಸಮಾರಂಭದಲ್ಲಿ ಭಾರತದ 15ನೇ ಉಪರಾಷ್ಟ್ರಪತಿಯಾಗಿ ಚಂದ್ರಾಪುರಂ ಪೊನ್ನುಸ್ವಾಮಿ ರಾಧಾಕೃಷ್ಣನ್ ಅವರು ಪ್ರಮಾಣವಚನ ಸ್ವೀಕರಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಹಿರಿಯ ಸರ್ಕಾರಿ ಅಧಿಕಾರಿಗಳು ಮತ್ತು ಗಣ್ಯರ ಸಮ್ಮುಖದಲ್ಲಿ ರಾಧಾಕೃಷ್ಣನ್ ಅವರಿಗೆ ಪ್ರಮಾಣ ವಚನ ಬೋಧಿಸಿದರು.



4 ಮಹಾಲಕ್ಷ್ಮೀ ಕೋ ಆಪರೇಟಿವ್ ಬ್ಯಾಂಕ್ ಲಿ., ಉಡುಪಿ; 2024-25ನೇ ಸಾಲಿನಲ್ಲಿ 21.40 ಕೋಟಿ ಲಾಭ : ಯಶ್‌ಪಾಲ್ ಎ. ಸುವರ್ಣ
6 ಶ್ರೀ ಗುರುಸಿದ್ಧೇಶ್ವರ ಸಹಕಾರ ಬ್ಯಾಂಕಿನ 46ನೇ ವಾರ್ಷಿಕ ಮಹಾಸಭೆ
7 ನಿಮ್ಮ ಪ್ರಶ್ನೆ – ನಮ್ಮ ಉತ್ತರ

## ಸಂಪಾದಕೀಯ

## ಆತ್ಮೀಯ ಸಹಕಾರಿಗಳೇ...



### ವಿದ್ಯೆಯಿಂದ ಪ್ರಬುದ್ಧರಾಗಿ, ಸಂಘಟನೆಯಿಂದ ಬಲಿಷ್ಠರಾಗಿ ಎಂದು ಬೋಧಿಸಿದ ಬ್ರಹ್ಮಶ್ರೀ ನಾರಾಯಣ ಗುರುಗಳ ನೆನೆಪಿನಲ್ಲಿ

ನನಗೆ ನಾರಾಯಣ ಗುರುಗಳ ಬಗ್ಗೆ ವಿಶೇಷ ಗೌರವವಿದೆ, ಅದಕ್ಕೆ ಕಾರಣವೂ ಇದೆ. ಒಂದೆಡೆ ಬ್ರಿಟಿಷರ ಆಳ್ವಿಕೆಯಿಂದ ಬಿಡುಗಡೆಗಾಗಿ ಇಡೀ ದೇಶವೇ ಹೋರಾಡುತ್ತಿದ್ದ ಕಾಲ. ಇನ್ನೊಂದೆಡೆ ಒಂದೆಡೆ ಈ ಸಮಾಜದ ಮೇಲ್ವರ್ಗದವರ ದರ್ಪಕ್ಕೆ ಒಳಗಾದ ಶೋಷಿತರ ಅಸಹಾಯಕತೆಯ ಸಂಕಷ್ಟ. ಇಂತಹ ಕಾಲಘಟ್ಟದಲ್ಲಿ ಜನಿಸಿದವರೇ ಮಹಾನ್ ಚೇತನ ಬ್ರಹ್ಮಶ್ರೀ ನಾರಾಯಣ ಗುರುಗಳು.

ಜಾತಿ, ಧರ್ಮ, ಮತಭೇದಗಳು ಹೆಚ್ಚಾಗಿದ್ದ ಆ ಕಾಲದಲ್ಲಿ ಕೇರಳದ ಚೆಂಬಳಂತಿ ಎಂಬಲ್ಲಿ ಕೆಳವರ್ಗದ ಕುಟುಂಬದಲ್ಲಿ ಜನಿಸಿದ, ಬ್ರಹ್ಮಶ್ರೀ ನಾರಾಯಣ ಗುರುಗಳು, ಮಹಾ ದಾರ್ಶನಿಕರಾಗಿ ಬೆಳೆದು ನಿಂತರು. ನಾರಾಯಣ ಗುರುಗಳು ತಮ್ಮ ತತ್ವಜ್ಞಾನದಿಂದ, ಆಧ್ಯಾತ್ಮಕ ಚಿಂತನೆಯಿಂದ, ಸಮಾಜ ಸುಧಾರಕರಾಗಿ ಬೆಳಗಿದರು. ಅವರು ತಾವು ಗಳಿಸಿದ ಆತ್ಮ ಜ್ಞಾನೋದಯದ ಮೂಲಕ ಸಾಮಾಜಿಕ ಸಮಾನತೆಯನ್ನು ಭೋಧಿಸಿ, ಸಾಧಿಸಿದರು. ಸಮಾಜದಲ್ಲಿನ ದುರ್ಬಲ ವರ್ಗಗಳ ಪರವಾಗಿ ಸಮಾಜ ಸುಧಾರಣಾ ಚಳವಳಿಯನ್ನು ಮುನ್ನಡೆಸಿದರು. ಇರುವುದು ಒಂದೇ ಜಾತಿ, ಒಂದೇ ಧರ್ಮ ಮತ್ತು ಎಲ್ಲರಿಗೂ ಒಬ್ಬನೇ ದೇವರು ಎಂಬುದು ಬ್ರಹ್ಮಶ್ರೀ ನಾರಾಯಣ ಗುರುಗಳ ನಿತ್ಯ ಬೋಧನೆಯಾಗಿತ್ತು. ನಾರಾಯಣ ಗುರುಗಳು, ಕೇರಳ ಸಮಾಜದಲ್ಲಿ ಇದ್ದ ಅಸ್ಪೃಶ್ಯತೆಯ ಪಿಡುಗಿಗೆ ತಮ್ಮದೇ ಆದ ರೀತಿಯಲ್ಲಿ ಸಮಾಧಾನಕರವಾದ ಪರಿಹಾರಗಳನ್ನು ನೀಡಿ, ದೇಶ ಸೇವೆಯೇ ಈಶ ಸೇವೆಯೆಂದು ಅವರು ಎಲ್ಲರಿಗೂ ಬೋಧಿಸಿದರು.

ಬ್ರಹ್ಮಶ್ರೀ ನಾರಾಯಣ ಗುರುಗಳು ತಮ್ಮ ಜನರಿಗೆ, ವಿದ್ಯೆಯಿಂದ ಪ್ರಬುದ್ಧರಾಗಿ, ಸಂಘಟನೆಯಿಂದ ಬಲಿಷ್ಠರಾಗಿ ಎಂದು ಹೇಳಿದ ಅವರು, ಸಾಮಾಜಿಕ ಸಮಾನತೆ, ಮಾನವೀಯತೆ, ಮತ್ತು ಶಿಕ್ಷಣದ ಮಹತ್ವವನ್ನು ಸಾರಿದರು. ಜಾತಿ ವ್ಯವಸ್ಥೆಯ ತಾರತಮ್ಯವನ್ನು ವಿರೋಧಿಸಿ, ಎಲ್ಲಾ ಮಾನವರೆಲ್ಲರಿಗೂ ದೇವಸ್ಥಾನಗಳ ಬಾಗಿಲು ತೆರೆದಿರಬೇಕೆಂದು ಪ್ರತಿಪಾದಿಸಿದರು. ನಾವು ದೇವರನ್ನು ಕಾಣಬೇಕಿರುವುದು ದೇವಸ್ಥಾನಗಳಲ್ಲಿ ಅಲ್ಲ, ಬದಲಿಗೆ ನಮ್ಮೊಳಗಿನ ಗುಡಿಯಲ್ಲಿಯೇ ಕಂಡುಕೊಳ್ಳಬೇಕು ಎಂದು ಬೋಧಿಸಿದರು.

ಅದಕ್ಕೆ ಕಾರಣವೂ ಇದೆ, ನಾರಾಯಣ ಗುರುಗಳನ್ನು ಊರಿನ ದೇವಸ್ಥಾನದೊಳಗೆ ಬಿಡಲಿಲ್ಲ; ಒಳಗೆ ಬಿಡುವಂತೆ ಅವರು ಬೇಡಲೂ ಇಲ್ಲ. ಬದಲಿಗೆ ಶೋಷಿತ ಜನರಿಗಾಗಿ ತಾವೇ ಶಿವನ ಗುಡಿ ಸ್ಥಾಪಿಸುವ ಮೂಲಕ, ಒಂದು ಹೊಸ ಚಳವಳಿಯ ಹಾದಿಯನ್ನೇ ತೋರಿದರು. 1888ರಲ್ಲಿ ಶಿವರಾತ್ರಿಯ ದಿನ ತಮ್ಮ ಊರಾದ ಅರವಿಪುರಂನಲ್ಲೇ ಶಿವಲಿಂಗವನ್ನು ಪ್ರತಿಷ್ಠಾಪಿಸಿದ ಅವರು, ದಲಿತರೂ ಸೇರಿದಂತೆ ಎಲ್ಲಾ ಜನಾಂಗದವರೂ ಪೂಜೆಗೈಯುವ ವ್ಯವಸ್ಥೆಯನ್ನು ಕಲ್ಪಿಸಿದರು. ತಳ ವರ್ಗದವರು ಉದ್ದಿಮೆ ಸ್ಥಾಪಿಸಲು ಪ್ರೋತ್ಸಾಹಿಸಿದರು. ಇದೆಲ್ಲವೂ ನಾರಾಯಣ ಗುರುಗಳು ಸ್ಥಾಪಿತ ಹಿತಾಸಕ್ತಿಗಳ ವಿರುದ್ಧವಾಗಿ ಹೇಗೆ ಹೋರಾಡಬೇಕೆನ್ನುವುದನ್ನು ತೋರಿಸಿಕೊಟ್ಟ ರೀತಿಯಾಗಿದೆ.

ನಾರಾಯಣ ಗುರುಗಳು ಬರೀ ಭೋಧಿಸದೆ, ಸಾಧಿಸಿ ತೋರಿಸಿಕೊಟ್ಟ ರೀತಿ ನನಗೆ ಅಸಾಮಾನ್ಯ ಸಂಗತಿಯಾಗಿ ಕಾಣುತ್ತದೆ. ಆಧ್ಯಾತ್ಮ ಗುರುವಾಗಿ ಪಾರಮಾರ್ಥಿಕಕ್ಕಷ್ಟೇ ಅಂಟಿಕೊಳ್ಳದೆ, ಲೌಕಿಕವೆನಿಸಿಕೊಂಡ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಕ್ಷೇತ್ರದಲ್ಲಿ ಪರಿವರ್ತನೆಯನ್ನು ಮಾಡಿ ತೋರಿಸಿದ ನಾರಾಯಣ ಗುರುಗಳನ್ನು ನೆನೆಯ ಬೇಕಾದ, ಅನುಸರಿಸಬೇಕಾದ, ಅವರು ತೋರಿದ ಹಾದಿಯಲ್ಲಿ ನಡೆಯಬೇಕಾದ ಅಗತ್ಯವಿದೆ ಎಂದು ನಾನು ಭಾವಿಸುತ್ತೇನೆ.

▶▶ ಎಚ್.ಕೆ. ಪಾಟೀಲ

## ಆರ್ಥಿಕ ಬೆಳವಣಿಗೆ 6.9%




**ಹೊಸದಿಲ್ಲಿ:** ಜೂನ್ ತ್ರೈಮಾಸಿಕದ ಬೆಳವಣಿಗೆ ಮತ್ತು ದೇಶೀಯವಾಗಿ ಅನುಭೋಗದ ಪ್ರಮಾಣದ ಏರಿಕೆಯಿಂದ ಉಂಟಾದ ಬೇಡಿಕೆಯನ್ನು ಆಧರಿಸಿ ಫಿಚ್ ರೇಟಿಂಗ್ಸ್ ಪ್ರಸಕ್ತ ಹಣಕಾಸು ವರ್ಷದ ಆರ್ಥಿಕ ಬೆಳವಣಿಗೆಯನ್ನು ಶೇ.6.9ಕ್ಕೆ ಏರಿಸಿದೆ.

ಈ ಮೊದಲು ಶೇ.6.5 ಎಂದು ಅಂದಾಜಿಸಿತ್ತು. ಅಮೆರಿಕ ಜತೆಗಿನ ವ್ಯಾಪಾರ ಮತ್ತು ಪ್ರತಿ ಸುಂಕದ ಅನಿಶ್ಚಿತತೆಗಳಿಂದಾಗಿ ಈ ವರ್ಷದ ಆರಂಭದಲ್ಲಿ ವಿವಿಧ ಏಜೆನ್ಸಿಗಳು ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತದ ಜಿಡಿಪಿ ಕುಸಿಯಲಿದೆ ಎಂದೇ ಅಂದಾಜಿಸಿದ್ದವು. ಅವಕ್ಕೆ ತದ್ವಿರುದ್ಧವಾಗಿ, ಭರ್ಜರಿ ಬೆಳವಣಿಗೆ ಸಾಧಿಸಲಿದೆ ಎಂದು ಅಂದಾಜಿಸಿದ ಮೊದಲ ಜಾಗತಿಕ ರೇಟಿಂಗ್ ಏಜೆನ್ಸಿ ಫಿಚ್ ಆಗಿದೆ. ಫಿಚ್ ಏಪ್ರಿಲ್–ಜೂನ್ ತ್ರೈಮಾಸಿಕದಲ್ಲಿ ಶೇ.6.7ರಷ್ಟು ಆರ್ಥಿಕ ಬೆಳವಣಿಗೆಯಾಗುತ್ತದೆ ಎಂದು ಅಂದಾಜಿಸಿತ್ತು. ವಾಸ್ತವವಾಗಿ ಶೇ.7.8ರಷ್ಟು ಬೆಳವಣಿಗೆ ಸಾಧಿಸಲಾಗಿದೆ.

ಪ್ರಸಕ್ತ ಹಣಕಾಸು ವರ್ಷದ ಮಾರ್ಚ್ ಮತ್ತು ಜೂನ್ ತ್ರೈಮಾಸಿಕಗಳ ನಡುವೆ ಆರ್ಥಿಕ ಚಟುವಟಿಕೆಯ ವೇಗವು ತೀವ್ರವಾಗಿದೆ. ಅಮೆರಿಕವನ್ನು ಹೊರತುಪಡಿಸಿ ರಫ್ತಿಗೆ ಹೊಸ ದೇಶಗಳ ಶೋಧದಲ್ಲಿ ತೊಡಗಿದೆ. ಇಂಗ್ಲೆಂಡ್‌ನೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಂಡಿದೆ. ಸೆಪ್ಟೆಂಬರ್ 22ರಿಂದ ಜಿಎಸ್‌ಟಿ 2.0 ಜಾರಿಗೆ ಬರುತ್ತದೆ. ಆರ್ಥಿಕ ಬೆಳವಣಿಗೆಯಲ್ಲಿ ದೇಶೀಯ ಬೇಡಿಕೆ ಮುಖ್ಯ ಚಾಲಕ ಶಕ್ತಿಯಾಗಿರುತ್ತದೆ ಎಂದು ಫಿಚ್ ವಿಶ್ಲೇಷಿಸಿದೆ.

ಆರ್‌ಬಿಐ, ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ (ಎಡಿಬಿ) ಮತ್ತು ಎಸ್ ಆ್ಯಂಡ್ ಪಿ ಗ್ಲೋಬಲ್ ರೇಟಿಂಗ್ಸ್ 2026ನೇ ಹಣಕಾಸು ವರ್ಷದಲ್ಲಿ ಭಾರದ ಜಿಡಿಪಿ ಶೇ.6.5 ಎಂದು ಅಂದಾಜಿಸಿವೆ. ಮೂಡೀಸ್ ರೇಟಿಂಗ್ಸ್ 2025ರ ಕ್ಯಾಲೆಂಡರ್ ವರ್ಷದಲ್ಲಿ ಜಿಡಿಪಿ ಶೇ.6.3 ರಷ್ಟಿರುತ್ತದೆ ಎಂದಿದೆ. ಐಎಂಎಫ್ ಮತ್ತು ವಿಶ್ವಬ್ಯಾಂಕ್ ಪ್ರಸಕ್ತ ಹಣಕಾಸು ವರ್ಷದಲ್ಲಿ ಜಿಡಿಪಿ ಬೆಳವಣಿಗೆಯನ್ನು ಕ್ರಮವಾಗಿ ಶೇ.6.4 ಮತ್ತು ಶೇ.6.3 ಎಂದು ಅಂದಾಜಿಸಿವೆ.

# ವಿಧಾನ ಪರಿಷತ್‌ನ ನೂತನ ಸದಸ್ಯರ ಪ್ರಮಾಣ ವಚನ



**ಬೆಂಗಳೂರು:** ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ನೂತನವಾಗಿ ನಾಮ ನಿರ್ದೇಶನಗೊಂಡ ಡಾ. ಆರತಿ ಕೃಷ್ಣ, ರಮೇಶ್ ಬಾಬು, ಎಫ್. ಎಚ್. ಜಕ್ಕಪ್ಪನವರ್ ಮತ್ತು ಶಿವಕುಮಾರ್ ಕೆ. ಅವರು ವಿಧಾನ ಪರಿಷತ್‌ನ ಸದಸ್ಯರಾಗಿ ಪಮಾಣ ವಚನ ಸ್ವೀಕರಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ನೂತನವಾಗಿ ನಾಮನಿರ್ದೇಶನಗೊಂಡ ಸದಸ್ಯರುಗಳಿಗೆ ಪ್ರಮಾಣ ವಚನ ಬೋಧಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ. ಜಿ.ಪರಮೇಶ್ವರ, ಕಾನೂನು ಸಚಿವ ಎಚ್.ಕೆ. ಪಾಟೀಲ್, ಪಶುಸಂಗೋಪನೆ ಸಚಿವ ವೆಂಕಟೇಶ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು, ವಸತಿ ಸಚಿವ ಜಮೀರ್ ಅಹಮದ್ ಖಾನ್, ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

## ದಿನಾಂಕ : 23.09.2025ರಂದು ಮಹಾಮಂಡಳದ 60ನೇ ವಾರ್ಷಿಕ ಮಹಾಸಭೆ

**ಬೆಂಗಳೂರು :** ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳದ 2024–25ನೇ ಸಾಲಿನ 60ನೇ ವಾರ್ಷಿಕ ಮಹಾಸಭೆಯನ್ನು 23ನೇ ಸೆಪ್ಟೆಂಬರ್ 2025ರ ಮಂಗಳವಾರ ಬೆಳಿಗ್ಗೆ 11.00 ಗಂಟೆಗೆ ಮಹಾಮಂಡಳದ ದಿ॥ ಕೆ.ಎಚ್. ಪಾಟೀಲ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಸಭೆಗೆ ಮಹಾಮಂಡಳದ ಸದಸ್ಯ ಬ್ಯಾಂಕುಗಳ ಪ್ರತಿನಿಧಿಗಳು ಭಾಗವಹಿಸಬೇಕಾಗಿ ವಿನಂತಿ. ಒಂದು ಸದಸ್ಯ ಬ್ಯಾಂಕಿನಿಂದ ಒಬ್ಬ ಪ್ರತಿನಿಧಿಗೆ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ.

## ಪಟ್ಟಣ ಸಹಕಾರ ಬ್ಯಾಂಕುಗಳ ಗಮನಕ್ಕೆ

ಮಹಾಮಂಡಳವು **"ವಾರಪತ್ರಿಕೆ"** ಹಾಗೂ **"ತ್ರೈಮಾಸಿಕ ಬ್ಯಾಂಕಿಂಗ್ ಪ್ರಪಂಚ ಪತ್ರಿಕೆ"** ಎಂಬ ಎರಡು ಪತ್ರಿಕೆಗಳನ್ನು ಪಟ್ಟಣ ಸಹಕಾರ ಬ್ಯಾಂಕುಗಳಿಗೆ ಸಹಕಾರ ಕ್ಷೇತ್ರ, ಬ್ಯಾಂಕಿಂಗ್ ಕ್ಷೇತ್ರ ಹಾಗೂ ಇತರೆ ಉಪಯುಕ್ತ ಸುದ್ದಿ / ವಿಚಾರಗಳನ್ನು ಹಾಗೂ ಇತ್ತೀಚಿನ ದಿನಗಳಲ್ಲಿ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಬದಲಾವಣೆಗೊಳಪಡುವ ಸಹಕಾರಿ ಕಾನೂನು ವಿದ್ಯಮಾನಗಳ ಕುರಿತು ಪ್ರಶ್ನೋತ್ತರ, ವಿವಿಧ ಬ್ಯಾಂಕುಗಳ ಯಶೋಗಾಥೆ, ಪ್ರಗತಿ ಚಿತ್ರ, ಬ್ಯಾಂಕುಗಳಲ್ಲಿ ಜರುಗಿರುವ ವಿವಿಧ ಸಮಾರಂಭಗಳ ವಿವರಗಳನ್ನು ಪ್ರಕಟಿಸಲಾಗುತ್ತಿದೆ. ಈಗಾಗಲೇ ಪಟ್ಟಣ ಸಹಕಾರ ಬ್ಯಾಂಕುಗಳ ವಾರ್ಷಿಕ ಮಹಾಸಭೆಗಳು ಜರುಗುತ್ತಿದ್ದು, ಮಹಾಸಭೆಯ ಛಾಯಾಚಿತ್ರ (ಫೋಟೊ) ವನ್ನು ಮತ್ತು ವರದಿಗಳನ್ನು ಹಾಗೂ ಬ್ಯಾಂಕಿಗೆ ಸಂಬಂಧಿಸಿದ ವರದಿಗಳನ್ನು ಕೂಡಲೇ ಮಹಾಮಂಡಳಕ್ಕೆ ಅಂಚೆ ಮೂಲಕ ಅಥವಾ ಇ–ಮೇಲ್ ವಿಳಾಸಕ್ಕೆ email: editorkubf1@gmail.com ಅಥವಾ kscubfed@gmail.comಗೆ ಕಳುಹಿಸಿಕೊಟ್ಟಲ್ಲಿ ಮಹಾಮಂಡಳದ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದು.

## ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ಅಧ್ಯಕ್ಷರು /ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿ ಸದಸ್ಯರುಗಳಿಗೆ ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣ

ಕರ್ನಾಟಕ ರಾಜ್ಯ ಸಹಕಾರ ಪಟ್ಟಣ ಬ್ಯಾಂಕುಗಳ ಮಹಾಮಂಡಳವು ರಾಜ್ಯದ ಪಟ್ಟಣ ಸಹಕಾರ ಬ್ಯಾಂಕುಗಳ ಅಧ್ಯಕ್ಷರು / ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿ ಸದಸ್ಯರುಗಳಿಗೆ ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಒಂದು ದಿನದ ರಾಜ್ಯಮಟ್ಟದ ವಿಚಾರ ಸಂಕಿರಣವನ್ನು ದಿನಾಂಕ : 27.09.2025ರಂದು ಗದಗ ಜಿಲ್ಲೆಯ ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ಸಭಾಂಗಣ, ಹುಬ್ಬಳ್ಳಿ–ಗದಗ ರಸ್ತೆ, ಹುಲಕೋಟಿ – 582205 ಇಲ್ಲಿ ಏರ್ಪಡಿಸಲಾಗಿದೆ.

ಸದರಿ ವಿಚಾರ ಸಂಕಿರಣದಲ್ಲಿ ಕಾರ್ಪೋರೇಟ್ ಆಡಳಿತ ಪರಿಕಲ್ಪನೆಗಳು ಮತ್ತು ಸಿದ್ಧಾಂತಗಳು ಹಾಗೂ ನಿರ್ದೇಶಕ ಮಂಡಳಿಯ ಪಾತ್ರ, ಪಟ್ಟಣ ಸಹಕಾರ ಬ್ಯಾಂಕುಗಳಲ್ಲಿ ಗ್ರಾಹಕರ ಸೇವೆ / ವ್ಯವಹಾರ ಅಭಿವೃದ್ಧಿ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಮತ್ತು ನಿಯಮಗಳಲ್ಲಿ ಇತ್ತೀಚಿನ ತಿದ್ದುಪಡಿಗಳ ವಿವರ ವಿಷಯಗಳ ಕುರಿತು ನುರಿತ ಬ್ಯಾಂಕಿಂಗ್ ತಜ್ಞರುಗಳಿಂದ ಉಪನ್ಯಾಸ ನೀಡಲಾಗುವುದು. ಸದರಿ ಕಾರ್ಯಕ್ರಮವನ್ನು ದಿನಾಂಕ : 27.09.2025ರಂದು ಬೆಳಿಗ್ಗೆ 08.30ಗಂಟೆಗೆ ಉಪಾಹಾರ ಹಾಗೂ ನೋಂದಣಿಯೊಂದಿಗೆ ಪ್ರಾರಂಭಿಸಲಾಗುವುದು. ಸದರಿ ವಿಚಾರ ಸಂಕಿರಣದಲ್ಲಿ ಭಾಗವಹಿಸುವವರು ಮಹಾಮಂಡಳದಲ್ಲಿ ದಿನಾಂಕ : 20.09.2025ರೊಳಗಾಗಿ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಕೋರಲಾಗಿದೆ. ಈ ವಿಚಾರ ಸಂಕಿರಣದಲ್ಲಿ ತಾವುಗಳು ಭಾಗವಹಿಸಿ, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಈ ಮೂಲಕ ಕೋರಲಾಗಿದೆ.

## ಮಹಾಲಕ್ಷ್ಮೀ ಕೋ ಆಪರೇಟಿವ್ ಬ್ಯಾಂಕ್ ಲಿ., ಉಡುಪಿ

## 2024-25ನೇ ಸಾಲಿನಲ್ಲಿ 21.40 ಕೋಟಿ ಲಾಭ : ಯಶ್‌ಪಾಲ್ ಎ. ಸುವರ್ಣ




**ಉಡುಪಿ :** ಕರಾವಳಿ ಭಾಗದ ಪ್ರತಿಷ್ಠಿತ ಪಟ್ಟಣ ಸಹಕಾರಿ ಸಂಸ್ಥೆಗಳಲ್ಲಿ ಒಂದಾದ ಮಹಾಲಕ್ಷ್ಮೀ ಕೋ-ಆಪರೇಟಿವ್ ಬ್ಯಾಂಕ್ 2024-25ನೇ ಸಾಲಿನಲ್ಲಿ ರೂ. 1063 ಕೋಟಿ ವ್ಯವಹಾರ ನಡೆಸಿ ರೂ. 21.40 ಕೋಟಿ ಲಾಭ ದಾಖಲಿಸಿರುವುದಾಗಿ ಬ್ಯಾಂಕಿನ ಅಧ್ಯಕ್ಷರಾದ ಉಡುಪಿ ಶಾಸಕ ಶ್ರೀ ಯಶ್‌ಪಾಲ್ ಎ. ಸುವರ್ಣ ತಿಳಿಸಿದ್ದಾರೆ.

ಮಹಾಲಕ್ಷ್ಮೀ ಕೋ ಆಪರೇಟಿವ್ ಬ್ಯಾಂಕ್ ಸಹಕಾರಿ ಇಲಾಖೆ ಹಾಗೂ ಭಾರತೀಯ ರಿಸರ್ವ್ ಬ್ಯಾಂಕಿನ ಪರಿವೀಕ್ಷಣೆಗೆ ಒಳಪಟ್ಟು ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 8 ಶಾಖೆಗಳನ್ನು ಹೊಂದಿದ್ದು 50,000 ಗ್ರಾಹಕರ ಮೂಲಕ ವ್ಯವಹಾರ ನಡೆಸುತ್ತಿದೆ.

ಬ್ಯಾಂಕ್ 2024-25ನೇ ಸಾಲಿನಲ್ಲಿ ರೂ.11,457 ಕೋಟಿ ಒಟ್ಟು ವಹಿವಾಟು ನಡೆಸಿ ರೂ. 604 ಕೋಟಿ ಠೇವಣಿ, ರೂ.459 ಕೋಟಿ ಸಾಲ ಮತ್ತು ಮುಂಗಡದೊಂದಿಗೆ,ರೂ.39.93 ಕೋಟಿ ಪಾಲು ಬಂಡವಾಳದೊಂದಿಗೆ ರೂ.9.15 ಕೋಟಿ ನಿವ್ವಳ ಲಾಭ ಗಳಿಸಿ ಶೂನ್ಯ ನಿವ್ವಳ ಅನುತ್ಪಾದಕ ಸಾಲದ ಪ್ರಮಾಣದೊಂದಿಗೆ ಉತ್ತಮ ಪ್ರಗತಿ ಸಾಧಿಸಿದೆ.

ಕಳೆದ 15 ವರ್ಷಗಳಿಂದ ನಿರಂತರವಾಗಿ ಸದಸ್ಯ ಗ್ರಾಹಕರಿಗೆ ಅತೀ ಹೆಚ್ಚು ಡಿವಿಡೆಂಡ್ ನೀಡುವ ಕರಾವಳಿ ಭಾಗದ ಏಕೈಕ ಪಟ್ಟಣ ಸಹಕಾರಿ ಬ್ಯಾಂಕ್ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಮಹಾಲಕ್ಷ್ಮೀ ಕೋ ಆಪರೇಟಿವ್ ಬ್ಯಾಂಕ್, ಶಾಸನಬದ್ಧ ಲೆಕ್ಕಪರಿಶೋಧನೆಯಲ್ಲಿ 'ಎ' ಶ್ರೇಣಿಯನ್ನು ಪಡೆದು, ಸತತವಾಗಿ 9 ವರ್ಷದಿಂದ ದಕ್ಷಿಣ ಕನ್ನಡ ಜಿಲ್ಲಾ ಸಹಕಾರಿ ಬ್ಯಾಂಕ್ ನೀಡುವ ಪ್ರತಿಷ್ಠಿತ ಪ್ರಶಸ್ತಿ "ಸಾಧನ ಪ್ರಶಸ್ತಿ" ಬ್ಯಾಂಕ್ ಮುಡಿಗೇರಿಸಿಕೊಂಡಿದೆ.

ಪ್ರಸ್ತುತ ಬ್ಯಾಂಕಿನ ವ್ಯವಹಾರ ಕ್ಷೇತ್ರವನ್ನು ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಹಾಸನ, ಮೈಸೂರು, ಮಂಡ್ಯ ಜಿಲ್ಲೆಯನ್ನು ಒಳಗೊಂಡಿರುತ್ತದೆ. ಬಾಡಿಗೆ ಕಟ್ಟಡದಲ್ಲಿರುವ ಉಡುಪಿ ಶಾಖೆಯನ್ನು ಶೀಘ್ರದಲ್ಲಿಯೇ ನಗರದ ಹೃದಯ ಭಾಗದಲ್ಲಿರುವ ನೂತನ ಸ್ವಂತ ಕಟ್ಟಡಕ್ಕೆ ಸ್ಥಳಾಂತರಗೊಳ್ಳಲಿದ್ದು, ರಾಷ್ಟ್ರೀಕೃತ ಬ್ಯಾಂಕಿನಲ್ಲಿ ದೊರಕುವ ಎಲ್ಲಾ ಆಧುನಿಕ ಸೌಲಭ್ಯಗಳು ಲಭ್ಯವಿದ್ದು, ಮೊಬೈಲ್ ಬ್ಯಾಂಕಿಂಗ್, ಐಎಂಪಿಎಸ್ ಸೇವೆ ಸಹಿತ ಭಾರತ್ ಬಿಲ್ ಪೇಮೆಂಟ್ ಸಿಸ್ಟಮ್‌ನ್ನು ಅಳವಡಿಸಿಕೊಂಡಿದ್ದು, ಗ್ರಾಹಕರಿಗೆ ಹೆಚ್ಚಿನ ಸೇವೆಯನ್ನು ನೀಡುವ ದೃಷ್ಟಿಯಲ್ಲಿ ಯುಪಿಐ ಸೇವೆಯು ಲಭ್ಯವಿದ್ದು, ಸುಮಾರು 5 ಸಾವಿರ ಗ್ರಾಹಕರು ಇದರ ಸದುಪಯೋಗವನ್ನು ಪಡೆದಿರುತ್ತಾರೆ.

ಪ್ರತಿ ವರ್ಷದಂತೆ ಬ್ಯಾಂಕಿನ ವತಿಯಿಂದ ಸುಮಾರು 50 ಲಕ್ಷ ವೆಚ್ಚದಲ್ಲಿ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯ ಸುಮಾರು 1,500 ಮಂದಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸಮಾಜಮುಖಿ ಕಾರ್ಯಗಳಿಗೆ ವಿನಿಯೋಗಿಸಲಾಗಿದ್ದು, ಉಚ್ಚಿಲ ದಸರಾ ಮಹೋತ್ಸವದ ಸಂದರ್ಭದಲ್ಲಿ ಅವಿಭಜಿತ ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ಚಿತ್ರ ಬಿಡಿಸುವ ಸ್ಪರ್ಧೆ ಹಾಗೂ ತೃತೀಯ ಬಾರಿಗೆ ಉಡುಪಿ ಜಿಲ್ಲೆಯಲ್ಲಿ ಪೊಣ್ಣು ಪಿಲಿ ನಲಿಕೆ ಸ್ಪರ್ಧೆಯನ್ನು ಯಶಸ್ವಿಯಾಗಿ ಆಯೋಜಿಸುವ ಮೂಲಕ ಸಾಂಸ್ಕೃತಿಕ ಕಾರ್ಯಕ್ರಮಕ್ಕೂ ಪ್ರೋತ್ಸಾಹ ನೀಡಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಬ್ಯಾಂಕಿನ ವ್ಯವಹಾರದಲ್ಲಿ ಸಹಕರಿಸಿದ ಸರ್ವರಿಗೂ ವಿಶೇಷ ಅಭಿನಂದನೆಗಳನ್ನು ಸಲ್ಲಿಸಿ, ಮುಂದಿನ ದಿನಗಳಲ್ಲಿಯೂ ಬ್ಯಾಂಕಿನ ಪ್ರಗತಿಗೆ ಸರ್ವರ ಸಲಹೆ ಸಹಕಾರವನ್ನು ಯಾಚಿಸುವುದಾಗಿ ಅಧ್ಯಕ್ಷರಾದ ಶ್ರೀ ಯಶ್‌ಪಾಲ್ ಎ. ಸುವರ್ಣರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಸಮಾರಂಭದಲ್ಲಿ ಬ್ಯಾಂಕಿನ ಎಲ್ಲಾ ಆಡಳಿತ ಮಂಡಳಿ ಸದಸ್ಯರು, ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ದಿ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಲಿ., ಶಿಕಾರಿಪುರ : 61ನೇ ವಾರ್ಷಿಕ ಮಹಾಸಭೆ



**ಶಿಕಾರಿಪುರ :** ದಿ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಲಿ., ಶಿಕಾರಿಪುರ ಇದರ 2024-25ನೇ ಸಾಲಿನ 61ನೇ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ನಗರದ ಮಂಡಿಪೇಟೆಯಲ್ಲಿರುವ ಜೈನ ಮಂದಿರ ಸಭಾಂಗಣದಲ್ಲಿ ನೆರವೇರಿತು.

ಮಹಾಸಭೆಯ ಅಧ್ಯಕ್ಷತೆಯನ್ನು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಹೆಚ್.ಎಸ್. ಮಲ್ಲಣಾರ್ಯರವರು ಅಧ್ಯಕ್ಷತೆ ವಹಿಸಿದರು ವೇದಿಕೆಯಲ್ಲಿ ಉಪಾಧ್ಯಕ್ಷರಾದ ಶ್ರೀಮತಿ ಜಯಂತಿ ಶಾಸ್ತ್ರೀಯವರು ಹಾಗೂ ನಿರ್ದೇಶಕರಾದ ಶ್ರೀ ಹೆಚ್.ಎಸ್. ಮಂಜುನಾಥ್, ಶ್ರೀ ಆರ್. ಶಿವಬಸಪ್ಪ, ಶ್ರೀ ಎಂ.ಬಿ. ಚನ್ನವೀರಪ್ಪನವರು ಶ್ರೀ ಹೆಚ್. ಸಿದ್ದಲಿಂಗೇಶ್, ಶ್ರೀ ಹೆಚ್.ಸಿ. ಯೋಗೀಶ್ (ಮಡ್ಡಿ) ಶ್ರೀಮತಿ ಎಸ್. ಎಸ್. ಅನುಪಮರವರು ಶ್ರೀ ಯೋಗೀಶ್ ಅಂಗಡಿ ಶ್ರೀ ಬಿ.ಪಿ. ಉಮಾಶಂಕರ್, ಶ್ರೀ ಹೆಚ್.ಎಸ್. ಗಜೇಂದ್ರ ಶ್ರೀ ಹೆಚ್.ಹೆಚ್. ರವಿಕುಮಾರ್‌ರವರು ಹಾಗೂ ಬ್ಯಾಂಕಿನ ವ್ಯವಸ್ಥಾಪಕರಾದ ಶ್ರೀ ಹೆಚ್. ಸಂಜಯ್ ಮತ್ತು ಸಿಬ್ಬಂದಿಗಳು ಹಾಜರಿದ್ದರು.

ಬ್ಯಾಂಕ್ 2024-25ನೇ ಸಾಲಿನಲ್ಲಿ ಅಭಿವೃದ್ಧಿ ಪಥದಲ್ಲಿ ಮುನ್ನಡೆದಿರುತ್ತದೆ. ಬ್ಯಾಂಕು ಇತ್ತೀಚೆಗೆ ಸಿಬಿಎ (ಕೋರ್ ಬ್ಯಾಂಕಿಂಗ್) ತಾಂತ್ರಿಕತೆಗಳನ್ನು ಅಳವಡಿಸಿಕೊಂಡಿದ್ದು ಸಹಕಾರಿ ಕ್ಷೇತ್ರದ ಹೆಚ್ಚಿನ ಬೆಳವಣಿಗೆಗೆ ಸಹಕಾರಿಯಾಗಿದೆ ನಮ್ಮ ಬ್ಯಾಂಕಿನ ಠೇವಣಿ ಸಂಗ್ರಹ 5550.68 ಲಕ್ಷ ರೂಪಾಯಿಗಳಾಗಿದ್ದು ಒಟ್ಟು ಸಾಲ 2852.39 ಲಕ್ಷಗಳಾಗಿರುತ್ತದೆ. ಹಾಗೂ ವರದಿ ಸಾಲಿನಲ್ಲಿ ಒಟ್ಟು ಆದಾಯ 120.42 ಲಕ್ಷಗಳಲ್ಲಿ ಅನುತ್ಪಾದಕ ಆಸ್ತಿ 47.00 ಲಕ್ಷಗಳನ್ನು ಅನುವುಮಾಡಿ ರೂ 72.85ಲಕ್ಷಗಳು ನಿವ್ವಳ ಲಾಭ ಆಗಿರುತ್ತದೆ. ಆಡಳಿತ ಮಂಡಳಿಯವರು ಸದಸ್ಯರಿಗೆ ಶೇ.11% ರಷ್ಟು ಲಾಭಾಂಶವನ್ನು ಪಾವತಿಸುವುದಕ್ಕೆ ತೀರ್ಮಾನಿಸಿದೆ. ಹಾಗೂ ಸದಸ್ಯರ ಮಕ್ಕಳನ್ನು ಪ್ರೋತ್ಸಾಹಿಸಲು ಪ್ರತಿಭಾ ಪುರಸ್ಕಾರವನ್ನು ನೀಡಿ ಗೌರವಿಸಲಾಯಿತು.

# ದಿ ಆಲಮೇಲ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ : 27ನೇ ವಾರ್ಷಿಕ ಮಹಾಸಭೆ



**ಆಲಮೇಲ :** ಸದಸ್ಯರ ಸಹಕಾರ ಮತ್ತು ಆಡಳಿತ ಮಂಡಳಿಯಲ್ಲಿ ಒಗ್ಗಟ್ಟು ಇದ್ದಲ್ಲಿ ಮಾತ್ರ ಬ್ಯಾಂಕು ಬೆಳವಣಿಗೆ ಆಗಲು ಸಾಧ್ಯ ಎಂದು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಶಿವುಕುಮಾರ ಜಿ. ಗುಂದಗಿ ಹೇಳಿದರು. ದಿನಾಂಕ : 07.09.2025 ರಂದು ಬ್ಯಾಂಕಿನ 27ನೇ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದರು.

ಸುಮಾರು 27 ವರ್ಷಗಳ ಹಿಂದೆ ಕೇವಲ 10ಲಕ್ಷ ಬಂಡವಾಳದೊಂದಿಗೆ ಪ್ರಾರಂಭವಾದ ಬ್ಯಾಂಕು ಇಂದು 55 ಕೋಟಿ ರೂಪಾಯಿಯಷ್ಟು ಬಂಡವಾಳ ಹೊಂದಿದ್ದು, ರೂಪಾಯಿ 18.00ಲಕ್ಷ ನಿವ್ವಳ ಲಾಭ ಗಳಿಸಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಚಾರ. ದಿ ಆಲಮೇಲ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ ಪ್ರಾರಂಭಿಸಿ ಬಡವರಿಗೆ, ದೀನದಲಿತರಿಗೆ, ವ್ಯಾಪಾರಸ್ಥರಿಗೆ, ನೌಕರ ವರ್ಗದವರಿಗೆ ಅನುಕೂಲವಾಗುವ ರೀತಿಯಲ್ಲಿ ಅವರಿಗೆ ಸಾಲ ಸೌಲಭ್ಯ ನೀಡಿ ನಿರುದ್ಯೋಗವನ್ನು ಹೋಗಲಾಡಿಸುವ ನಿಟ್ಟಿನಲ್ಲಿ ಬಹಳಷ್ಟು ಶ್ರಮ ವಹಿಸಿದೆ ಎಂದು ಅವರು ಹೇಳಿದರು. 27ನೇ ವಾರ್ಷಿಕ ಮಹಾಸಭೆಯಲ್ಲಿ ಉಪಾಧ್ಯಕ್ಷರಾದ ಶ್ರೀ ಆರ್.ಜಿ. ಪಾಟೀಲ, ನಿರ್ದೇಶಕರುಗಳಾದ ಎಸ್.ಜಿ. ಉಪ್ಪಿನ, ಎಸ್.ಎಂ. ಕೋಳಾರಿ, ಬಿ.ಬಿ. ರಾಯಗೊಂಡ, ಎಂ.ಎಂ. ಕೋತಂಬರಿ, ಜಿ.ಎಸ್. ಬುರುಡ, ಎಂ.ಜಿ.ಧನಶ್ರೀ, ಬಿ.ಎಸ್. ಜಾನಾ, ಎಸ್.ಎಸ್. ಗುಂದಗಿ, ಶ್ರೀಮತಿ ಎಂ.ಆರ್. ಮಹಾಜನ, ಶ್ರೀಮತಿ ಎಂ.ಎಸ್.ಜಂಗಮಶೆಟ್ಟಿ, ಶ್ರೀಮತಿ ಪಿ.ಬಿ. ನಾರಾಯಣಕರ ಮತ್ತು ಬ್ಯಾಂಕಿನ ವಿಶೇಷ ಆಹ್ವಾನಿತ ಸದಸ್ಯರಾದ ಎ.ಸಿ.ಜೋಶಿ, ಎಂ.ಸಿ.ಗುಂದಗಿ ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕ ನರೇಂದ್ರ ಬಾಸುತ್ಕರ ವರದಿ ವಾಚನ ಓದಿದರು. ಬ್ಯಾಂಕಿನ ಶಾಖಾ ವ್ಯವಸ್ಥಾಪಕ ಅಶೋಕ ಕೆ.ಮಸಳಿ ನಿರೂಪಿಸಿ ವಂದಿಸಿದರು.

# ಶ್ರೀ ಗುರುಸಿದ್ಧೇಶ್ವರ ಸಹಕಾರ ಬ್ಯಾಂಕಿನ 46ನೇ ವಾರ್ಷಿಕ ಮಹಾಸಭೆ




**ಹುಬ್ಬಳ್ಳಿ :** ಹುಬ್ಬಳ್ಳಿ–ಧಾರವಾಡ ಅವಳಿ ನಗರದ ಪ್ರತಿಷ್ಠಿತ ಶ್ರೀ ಗುರುಸಿದ್ಧೇಶ್ವರ ಬ್ಯಾಂಕಿನ 46ನೇ ವಾರ್ಷಿಕ ಮಹಾಸಭೆಯು ದಿನಾಂಕ : 08.09.2025 ರಂದು ಬ್ಯಾಂಕಿನ ಶ್ರೀ ಶ್ರೀ ಶ್ರೀ ಮಹಾಂತ ಅಪ್ಪಗಳ ಸಭಾಭವನದಲ್ಲಿ ಜರುಗಿತು.

ಮಹಾಸಭೆಯಲ್ಲಿ ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಶಂಕರಣ್ಣ ಈ. ಮುನವಳ್ಳಿ, ಉಪಾಧ್ಯಕ್ಷರಾದ ಶ್ರೀ ಅರವಿಂದ ಲಿಂಬಿಕಾಯಿ ಹಾಗೂ ಆಡಳಿತ ಮಂಡಳಿ ನಿರ್ದೇಶಕರಾದ ಶ್ರೀ ವೀರಣ್ಣ ಕಲ್ಲೂರ, ಶ್ರೀ ಎಫ್.ಸಿ. ಭೂಸದ, ಶ್ರೀ ಮಾರುತಿ ಜಾಧವ, ಶ್ರೀ ಮಹೇಶ ಸಿ. ಟೆಂಗಿನಕಾಯಿ, ಶ್ರೀ ವಿಜಯಾನಂದ ಬಿ. ಹೊಸಕೋಟಿ, ಶ್ರೀ ಲಕ್ಷ್ಮೀಕಾಂತ ಅ. ಪಾಟೀಲ, ಶ್ರೀಮತಿ ಪ್ರೇಮಾ ಆರಟ್ಟಿ, ಶ್ರೀಮತಿ ಗೀತಾ ಮುಳ್ಳಳ್ಳಿ, ಶ್ರೀ ಮಂಜುನಾಥ ಮುನವಳ್ಳಿ, ಶ್ರೀ ಉಮೇಶ ಅಪ್ಪೋಜಿ, ಶ್ರೀ ರಾಜಣ್ಣ ಬತ್ತಿ, CA ಬಸವರಾಜ ಚೆನ್ನಿ ಹಾಗೂ ವಕೀಲರಾದ ಶ್ರೀ ಗುರು ಹಿರೇಮಠ ಇವರು ಉಪಸ್ಥಿತರಿದ್ದರು.

ಮಹಾಸಭೆಗೆ ಆಗಮಿಸಿದ ಶ್ರೀಮನ್ ಮಹಾರಾಜ ನಿರಂಜನ ಜಗದ್ಗುರು ಡಾ. ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು, ಶ್ರೀ ಜಗದ್ಗುರು ಮೂರು ಸಾವಿರಮಠ ಹುಬ್ಬಳ್ಳಿ ಇವರಿಗೆ ಬ್ಯಾಂಕಿನ ಗೌರವಾನ್ವಿತ ಅಧ್ಯಕ್ಷರಾದ ಶ್ರೀ ಶಂಕರಣ್ಣ ಈ. ಮುನವಳ್ಳಿಯವರು ಮಾಲಾರ್ಪಣೆ ಮಾಡಿ ಬರಮಾಡಿಕೊಂಡರು.

ಬ್ಯಾಂಕಿನ ಗೌರವಾನ್ವಿತ ಅಧ್ಯಕ್ಷರಾದ ಶ್ರೀ ಶಂಕರಣ್ಣ ಮುನವಳ್ಳಿಯವರು ಮಹಾಸಭೆಗೆ ಆಗಮಿಸಿದ ಶೇರುದಾರ ಸದಸ್ಯರನ್ನು ಉದ್ದೇಶಿಸಿ ಸ್ವಾಗತ ಕೋರಿದರು. ತದನಂತರ ಬ್ಯಾಂಕಿನ ಸನ್ 2024–2025ನೇ ಸಾಲಿನ ವಾರ್ಷಿಕ ವರದಿಯನ್ನು ಮತ್ತು ಪ್ರಸ್ತುತ ವರ್ಷದ ಮಹಾಸಭೆಯ ಎಲ್ಲಾ ವಿಷಯಗಳನ್ನು ಮಹಾಸಭೆಗೆ ಮಂಡಿಸಿದರು ಮತ್ತು ಬ್ಯಾಂಕು ಸತತವಾಗಿ ಲಾಭದಲ್ಲಿ ಇದ್ದು ಕಳೆದ ಆರು ವರ್ಷಗಳಿಂದ ಶೇಕಡಾ 10%ರಷ್ಟು ಡಿವಿಡೆಂಡನ್ನು ನೀಡುತ್ತಿದ್ದೇವೆ. ಮತ್ತು ಬ್ಯಾಂಕಿನ ಗೌರವಾನ್ವಿತ ಸದಸ್ಯರ ಮಕ್ಕಳು ಹೆಚ್ಚಿನ ಅಂಕ ಪಡೆದವರು ಅಂದರೆ ಎಸ್.ಎಸ್.ಎಲ್.ಸಿ.ಯಲ್ಲಿ ಹೆಚ್ಚಿನ ಅಂಕ ಪಡೆದವರಿಗೆ ರೂ. 5000=00, ದ್ವಿತೀಯ ಪಿ.ಯು.ಸಿ.ಯಲ್ಲಿ ಹೆಚ್ಚಿನ ಅಂಕ ಪಡೆದವರಿಗೆ ರೂ. 7500=00 ಮತ್ತು ಯಾವುದೇ ಪದವಿಯಲ್ಲಿ ಹೆಚ್ಚಿನ ಅಂಕ ಪಡೆದ ಮಕ್ಕಳಿಗೆ ರೂ. 10,000=00 ಪ್ರತಿಭಾ ಪುರಸ್ಕಾರ ನೀಡಬೇಕೆಂದು ಬ್ಯಾಂಕಿನ ಆಡಳಿತ ಮಂಡಳಿಯವರು ನಿರ್ಣಯಿಸಿರುತ್ತಾರೆ. ಇದನ್ನು ಸರ್ವಸದಸ್ಯರು ಸಹ ಒಪ್ಪಿಗೆಯನ್ನು ನೀಡಿರುತ್ತಾರೆ. ಇದನ್ನು ಸರ್ವಸದಸ್ಯರು ಸರ್ವಾನುಮತದಿಂದ ಒಪ್ಪಿ ಅಂಗೀಕರಿಸಿದರು.

ಎಲ್ಲಾ ವಿಷಯಗಳು ಮುಗಿದ ನಂತರ, ಹುಬ್ಬಳ್ಳಿ ಮೂರು ಸಾವಿರ ಮಠದ ಪೂಜ್ಯ ಶ್ರೀಮನ್ ಮಹಾರಾಜ ನಿರಂಜನ ಜಗದ್ಗುರು ಡಾ. ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು ಇವರು ಮಹಾಸಭೆಯನ್ನು ಉದ್ದೇಶಿಸಿ, ಶ್ರೀ ಗುರುಸಿದ್ಧೇಶ್ವರ ಬ್ಯಾಂಕು ಲಿಂ. ಶ್ರೀಮನ್ ಮಹಾರಾಜ ನಿರಂಜನ ಜಗದ್ಗುರು ಡಾ. ಗಂಗಾಧರ ರಾಜ ಯೋಗೀಂದ್ರ ಮಹಾಸ್ವಾಮಿಗಳು, ಮೂರು ಸಾವಿರಮಠ ಹುಬ್ಬಳ್ಳಿ ಪೂಜ್ಯರಿಂದ ಪ್ರಾರಂಭವಾಗಿರುತ್ತದೆ.

ಪೂಜ್ಯರಿಗೆ ಪ್ರಣಾಮಗಳನ್ನು ಸಲ್ಲಿಸಿ, ಬ್ಯಾಂಕಿನ ವಹಿವಾಟು ಚೆನ್ನಾಗಿ ಇದೆ. ಈ ಬ್ಯಾಂಕಿನಿಂದ ಸಾಲ ಪಡೆದುಕೊಂಡ ಸಾಲಗಾರರು ಸದುಪಯೋಗ ಪಡೆಸಿಕೊಂಡು ಸರಿಯಾಗಿ ಮರುಪಾವತಿ ಮಾಡುತ್ತಿದ್ದಾರೆ. ಬ್ಯಾಂಕಿನ NPA ಪ್ರಮಾಣವು ಶೇ.95%ರಷ್ಟು ಹೆಚ್ಚಿಗೆ ಇದ್ದದ್ದನ್ನು ಬ್ಯಾಂಕಿನ ಅಧ್ಯಕ್ಷರಾದ ಶ್ರೀ ಶಂಕರಣ್ಣ ಮುನವಳ್ಳಿಯವರ ನೇತೃತ್ವದಲ್ಲಿ NPA ಶೇ.13% ರಷ್ಟು ಕಡಿಮೆ ಮಾಡಿರುತ್ತಾರೆ. ಇದಕ್ಕೆ ಭಾರತೀಯ ರಿಜರ್ವ ಬ್ಯಾಂಕಿನವರು ಶಿಫಾರಸು ಮಾಡಿರುತ್ತಾರೆ. ಬ್ಯಾಂಕಿನ ಅದ್ಯಕ್ಷರಾದ ಶ್ರೀ ಶಂಕರಣ್ಣ ಮುನವಳ್ಳಿಯವರು KLE ಶಿಕ್ಷಣ ಸಂಸ್ಥೆಯ ಹಿರಿಯ ನಿರ್ದೇಶಕರಿದ್ದು, ಈ ಬ್ಯಾಂಕಿನ ಗ್ರಾಹಕರಿಗೆ ಒಳ್ಳೆಯ ನ್ಯಾಯವನ್ನು ಒದಗಿಸಿದ್ದಾರೆ. ಅವರಿಗೆ ಎಲ್ಲರೂ ಸಹಕಾರ ನೀಡಬೇಕೆಂದರು. ಶಾಸಕರಾದ ಶ್ರೀ ಮಹೇಶ ಟೆಂಗಿನಕಾಯಿಯವರು ಆಡಳಿತ ಮಂಡಳಿಯ ಸದಸ್ಯರಾಗಿದ್ದಾರೆ. ಮುಂಬರುವ ದಿನಗಳಲ್ಲಿ ಎಲ್ಲರೂ ಕೂಡಿ ಬ್ಯಾಂಕನ್ನು ಹೆಚ್ಚು ಬೆಳೆಸೋಣ ಎಂದು ಅಧ್ಯಕ್ಷರಿಗೆ, ಆಡಳಿತ ಮಂಡಳಿ ಸದಸ್ಯರಿಗೆ, ಶೇರುದಾರರಿಗೆ, ಸಿಬ್ಬಂದಿಗಳಿಗೆ ಶುಭ ಹಾರೈಸಿ, ಆಶೀರ್ವಚನ ನೀಡಿದರು.

ವಂದನಾರ್ಪಣೆಯನ್ನು ಬ್ಯಾಂಕಿನ ಉಪಾಧ್ಯಕ್ಷರಾದ ಶ್ರೀ ಅರವಿಂದ ಲಿಂಬಿಕಾಯಿ ಅವರು ಮಾಡಿದರು ಹಾಗೂ ವಾರ್ಷಿಕ ಮಹಾಸಭೆಯ ಕಾರ್ಯಕ್ರಮವನ್ನು ಬ್ಯಾಂಕಿನ ಮುಖ್ಯಕಾರ್ಯ ನಿರ್ವಹಣಾಧಿಕಾರಿಯಾದ ಶ್ರೀ ಜಗದೀಶ ಎಸ್. ಕಮಡೊಳ್ಳಿ ಶೆಟ್ಟರ ನಿರೂಪಿಸಿದರು.

# ನಿಮ್ಮ ಪ್ರಶ್ನೆ ನಮ್ಮ ಉತ್ತರ






**ಸುಧಾಕರ್ ಭಟ್,** ಬ್ಯಾಂಕಿಂಗ್ ಸಲಹೆಗಾರರು.

**01. ನಮ್ಮಲ್ಲಿನ ಒಂದು ಸೌಹಾರ್ದ ಸಹಕಾರ ಸಂಘ ನಮ್ಮ ಬ್ಯಾಂಕಿನೊಂದಿಗೆ ವಿಲೀನಗೊಳ್ಳಲು ಮುಂದಾಗಿದೆ. ಈ ಸಹಕಾರ ಸಂಘವನ್ನು ನಮ್ಮ ಬ್ಯಾಂಕಿನೊಂದಿಗೆ ವಿಲೀನಗೊಳಿಸಬಹುದೇ?**

**– ಪಟ್ಟಣ ಸಹಕಾರ ಬ್ಯಾಂಕ್ ಲಿ., ಧಾರವಾಡ.**


**ಉತ್ತರ:** ಒಂದು ಪಟ್ಟಣ ಸಹಕಾರ ಬ್ಯಾಂಕು ಇನ್ನೊಂದು ಪಟ್ಟಣ ಸಹಕಾರ ಬ್ಯಾಂಕಿನೊಂದಿಗೆ ವಿಲೀನಗೊಳ್ಳಬಹುದು. ಆದರೆ, ಒಂದು ಸೌಹಾರ್ದ ಸಹಕಾರ ಸಂಘವನ್ನು ನಿಮ್ಮ ಬ್ಯಾಂಕಿನೊಂದಿಗೆ ವಿಲೀನಗೊಳಿಸುವಂತಿಲ್ಲ.

**02. ಜಿಲ್ಲಾ ಸಹಕಾರ ಬ್ಯಾಂಕಿನಲ್ಲಿ ನಮ್ಮ ಠೇವಣಿ ಇದೆ. ರಿಜರ್ವ್ ಬ್ಯಾಂಕಿನ ಮಾರ್ಗಸೂಚಿಯಂತೆ ಪಟ್ಟಣ ಸಹಕಾರ ಬ್ಯಾಂಕುಗಳು ತಮ್ಮ ಠೇವಣಿಯ ಕೇವಲ ಶೇ.5ರಷ್ಟನ್ನು ಬೇರೊಂದು ಬ್ಯಾಂಕಿನಲ್ಲಿ ಠೇವಣಿ ಇಡಬಹುದು. ಜಿಲ್ಲಾ ಸಹಕಾರ ಬ್ಯಾಂಕಿನಲ್ಲಿ ನಮ್ಮ ಠೇವಣಿ ಈ ಮಿತಿಯಷ್ಟಿರುವುದರಿಂದ, ನಮ್ಮ ಆರ್.ಎಫ್.ಡಿ ಯನ್ನು ಜಿಲ್ಲಾ ಸಹಕಾರ ಬ್ಯಾಂಕಿನಲ್ಲಿ ಇಡಬಹುದೇ?**

**– ಪಟ್ಟಣ ಸಹಕಾರ ಬ್ಯಾಂಕ್ ಲಿ., ಮುದಗಲ್.**

**ಉತ್ತರ:** ಶಾಸನಬದ್ದ ಮೀಸಲು ನಿಧಿಯ ಮೊತ್ತವನ್ನು ಜಿಲ್ಲಾ ಸಹಕಾರ ಬ್ಯಾಂಕು ಅಥವಾ ಅಪೆಕ್ಸ್ ಬ್ಯಾಂಕಿನಲ್ಲಿ ಆರ್.ಎಫ್.ಡಿ ರೂಪದಲ್ಲಿ ಠೇವಣಿ ಇಡುವುದು ಕಡ್ಡಾಯವಲ್ಲ. ರಿಜರ್ವ್ ಬ್ಯಾಂಕಿನ ಮಾರ್ಗಸೂಚಿಯಂತೆ ಪಟ್ಟಣ ಸಹಕಾರ ಬ್ಯಾಂಕುಗಳು ತಮ್ಮ ನಿಧಿಯನ್ನು ವಿನಿಯೋಗಿಸಬಹುದು ಎಂದು ಸಹಕಾರ ಸಂಘಗಳ ಕಾಯ್ದೆಯ ಕಲಂ 58ರಲ್ಲಿ ಹೇಳಿದೆ. ನಿಮ್ಮ ಬ್ಯಾಂಕಿನ ಎಸ್.ಎಲ್.ಆರ್. ಉದ್ದೇಶಕ್ಕಾಗಿ ಸರ್ಕಾರಿ ಭದ್ರತೆಗಳಲ್ಲಿ ಹೂಡಿಕೆ ಮಾಡಿದ ಮೊತ್ತವು ನಿಮ್ಮ ಶಾಸನಬದ್ಧ ಮೀಸಲು ನಿಧಿಯ ಮೊತ್ತದಷ್ಟು ಅಥವಾ ಅದಕ್ಕಿಂತ ಅಧಿಕವಿದ್ದರೆ, ಬೇರೆ ಯಾವುದೇ ಹೂಡಿಕೆ ಮಾಡುವ ಅಗತ್ಯವಿಲ್ಲ. ಈಗಾಗಲೇ ಜಿಲ್ಲಾ ಸಹಕಾರ ಬ್ಯಾಂಕಿನಲ್ಲಿ ಆರ್.ಎಫ್.ಡಿ ಮಾಡಿದ್ದರೆ ಅದನ್ನು ವಾಪಸ್ಸು ಪಡೆಯಬಹುದು ಅಥವಾ ಆರ್.ಎಫ್.ಡಿ ಯನ್ನು ಸಾಮಾನ್ಯ ಠೇವಣಿಯಾಗಿ ಪರಿವರ್ತಿಸಿಕೊಳ್ಳಬಹುದು.

## ಚೈತನ್ಯ ಮಹಿಳಾ ಸಹಕಾರ ಬ್ಯಾಂಕಿಗೆ ಪ್ರಶಸ್ತಿ




**ವಿಜಯಪುರ :** ಚೈತನ್ಯ ಮಹಿಳಾ ಸಹಕಾರ ಬ್ಯಾಂಕಿಗೆ ಸನ್ 2023–24ನೇ ಸಾಲಿಗಾಗಿ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ ನಿ., ವಿಜಯಪುರ ಇವರು ದಿನಾಂಕ  : 30/08/2025 ರಂದು ಜಿಲ್ಲೆಯ 19 ಪಟ್ಟಣ ಸಹಕಾರಿ ಬ್ಯಾಂಕುಗಳಲ್ಲಿ ಒಳ್ಳೆ ಪ್ರಗತಿಯುತ ಬ್ಯಾಂಕು ಎಂದು ದ್ವಿತೀಯ ಬಹುಮಾನ ನೀಡಿ ಬ್ಯಾಂಕಿನ ಅಧ್ಯಕ್ಷರಾದ ಶ್ರೀಮತಿ ಮಲ್ಲಮ್ಮ ಶಿ. ಯಾಳವಾರ ಹಾಗೂ ಪ್ರಧಾನ ವ್ಯವಸ್ಥಾಪಕರಾದ ಶ್ರೀಮತಿ ಲಕ್ಷ್ಮೀ ಆರ್. ಬಳಗೊಂಡ ಇವರಿಗೆ ಫಲಪುಷ್ಪ ಹಾಗೂ ಪ್ರಶಸ್ತಿಪತ್ರ ನೀಡಿ ಸನ್ಮಾನಿಸಿದರು.

## 6 ಕೋಟಿ ಐಟಿಆರ್ ಸಲ್ಲಿಕೆ : ಆದಾಯ ತೆರಿಗೆ ಇಲಾಖೆ

**ನವದೆಹಲಿ:** 2025–26ರ ಮೌಲ್ಯಮಾಪನ ವರ್ಷಕ್ಕೆ ಸಂಬಂಧಿಸಿದಂತೆ 6 ಕೋಟಿಗೂ ಅಧಿಕ ಆದಾಯ ತೆರಿಗೆ ವಿವರಗಳು (ಐಟಿಆರ್) ಸಲ್ಲಿಕೆಯಾಗಿವೆ ಎಂದು ಆದಾಯ ತೆರಿಗೆ ಇಲಾಖೆ ತಿಳಿಸಿದೆ.

ದಂಡ ಇಲ್ಲದೆ ಐಟಿಆರ್ ಸಲ್ಲಿಕೆಗೆ ಸೆಪ್ಟೆಂಬರ್ 15ರ ಕೊನೆಯ ದಿನದ ವೇಳೆಗೆ ತೆರಿಗೆ ಪಾವತಿದಾರರು ಮತ್ತು ತೆರಿಗೆ ವೃತ್ತಿಪರರು 6 ಕೋಟಿ ಐಟಿಆರ್ ಸಲ್ಲಿಕೆ ಮಾಡಿದ್ದಾರೆ ಎಂದು ಇಲಾಖೆ ತಿಳಿಸಿದೆ.

ಐಟಿಆರ್ ಸಲ್ಲಿಸುವ ತೆರಿಗೆ ಪಾವತಿದಾರರಿಗೆ ನೆರವು ಮತ್ತು ಸಂಬಂಧಿತ ಸೇವೆ ನೀಡಲು ಇಲಾಖೆಯ ಸಹಾಯವಾಣಿ ದಿನದ 24 ಗಂಟೆಯೂ ಕಾರ್ಯ ನಿರ್ವಹಿಸುತ್ತಿರುತ್ತದೆ. ಜೊತೆಗೆ ಇಲಾಖೆಯು ದೂರವಾಣಿ ಕರೆ, ವೆಬ್ ಸೆಷನ್, ಲೈವ್ ಚಾಟ್ ಮೂಲಕ ನೆರವು ನೀಡಲಿದೆ ಎಂದು ತಿಳಿಸಿದೆ.



## ಒನ್‌ಲೈನ್ ನ್ಯೂಸ್

ಈ ಪುಟದಲ್ಲಿನ ಸುದ್ದಿಗಳನ್ನು ಓದಿದ್ದೀರಾ...?
**ಕುತೂಹಲಕಾರಿಯಾದ ಸುದ್ದಿಗಳು** ನಿಮ್ಮ ಕಣ್ಣು ತಪ್ಪಿದ್ದರೆ, ಇಲ್ಲಿವೆ ಓದಿ.

- ಹಾಸನದಲ್ಲಿ ಗಣೇಶ ವಿಸರ್ಜನಾ ಮೆರವಣಿಗೆಯಲ್ಲಿ ಸ್ಥಳೀಯ ಗ್ರಾಮಸ್ಥರು ಪಾಲ್ಗೊಂಡಿದ್ದರು ಅದೇ ವೇಳೆ ಮಹಾರಾಷ್ಟ್ರದಿಂದ ಬಂದ ಕ್ಯಾಂಟರ್ ಲಾರಿಯೊಂದು ಏಕಾಏಕಿ ಮೆರವಣಿಗೆ ಮೇಲೆ ಎರಗಿದ ಪರಿಣಾಮ ಅವಘಡ ಸಂಭವಿಸಿದ್ದು, ಹತ್ತು ಜನರು ಪ್ರಾಣ ಕಳೆದುಕೊಂಡಿದ್ದರೆ, ಇಪ್ಪತ್ತಕ್ಕೂ ಹೆಚ್ಚು ಜನರ ಸ್ಥಿತಿ ಗಂಭೀರವಾಗಿದೆ. ಸದ್ಯ ಪೊಲೀಸರು ಚಾಲಕನನ್ನು ವಶಕ್ಕೆ ಪಡೆದಿದ್ದಾರೆ.
- ನೇಪಾಳದ ಮಾಜಿ ಮುಖ್ಯ ನ್ಯಾಯಮೂರ್ತಿಯಾಗಿದ್ದ ಸುಶೀಲಾ ಕಾರ್ಕಿ ಅವರು ಅಲ್ಲಿನ ಮಧ್ಯಂತರ ಸರ್ಕಾರದ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ರಾಷ್ಟ್ರಪತಿ ರಾಮಚಂದ್ರ ಪೌಡೆಲ್ ಅವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದ್ದಾರೆ. ಸುಶೀಲಾ ಕಾರ್ಕಿ ಅವರು ನೇಪಾಳದ ಮೊದಲ ಮಹಿಳೆ ಪ್ರಧಾನಿಯಾಗಿದ್ದಾರೆ.
- ಸೋಮವಾರಪೇಟೆ ತಾಲ್ಲೂಕಿನ ಮುಳ್ಳೂರು ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿನ ಆವರಣದಲ್ಲಿ ಗುಹೆ ಮಾದರಿಯೊಂದು ನಿರ್ಮಿಸಲಾಗಿದ್ದು, ಒಳಗೆ ಬಾವಲಿಗಳು, ಜೇಡರ ಬಲೆಗಳು, ಅಸ್ಥಿ ಪಂಜರಗಳು, ಸ್ಮಾರಕಗಳು, ಇತಿಹಾಸದ ಪಳೆಯುಳಿಕೆಗಳು, ಕೃತಕ ಪ್ರಾಣಿಗಳ ಮಾದರಿಗಳನ್ನು ಇರಿಸಲಾಗಿದೆ. ಶಾಲೆಯ ಮುಖ್ಯೋಪಾಧ್ಯಾಯ ಸತೀಶ್ ಅವರು, ತಮ್ಮ ಸ್ವಂತ 70 ಸಾವಿರ ರೂ. ಹಣವೆಚ್ಚ ಮಾಡಿ ತೂಗು ತೊಟ್ಟಿಲು ನಿರ್ಮಿಸಿದ್ದು, ಏಕಕಾಲದಲ್ಲಿ 30 ವಿದ್ಯಾರ್ಥಿಗಳು ಕುಳಿತುಕೊಳ್ಳಬಹುದಾದ ಸಾಮರ್ಥ್ಯವನ್ನು ಇದು ಹೊಂದಿದೆ.
- ಉತ್ತರ ಪ್ರದೇಶದ ಬುಲಂದ್‌ಶಹರ್‌ನಲ್ಲಿ ತ್ಯಾಜ್ಯದಿಂದ ಕಲೆಯನ್ನು ಉತ್ತೇಜಿಸಲು, ಸಂಪೂರ್ಣವಾಗಿ ಸೆರಾಮಿಕ್ ತ್ಯಾಜ್ಯದಿಂದ ತಯಾರಿಸಿದ ಅನೋಖಿ ದುನಿಯಾ ಎಂಬ ಉದ್ಯಾನವನವನ್ನು ನಿರ್ಮಿಸಲಾಗಿದೆ. ಈ ಉದ್ಯಾನವನವು 80 ಟನ್ ಸೆರಾಮಿಕ್ ತ್ಯಾಜ್ಯದಿಂದ ಮಾಡಲಾಗಿದ್ದು, 100 ವಿಶಿಷ್ಟ ಕಲಾಕೃತಿಗಳನ್ನು ಪ್ರದರ್ಶಿಸಲಾಗಿದೆ.
- ಬೆಂಗಳೂರಿನ ಘನತ್ಯಾಜ್ಯ ನಿರ್ವಹಣಾ ಪ್ರಾಧಿಕಾರ ಪದೆಪದೇ ಎಲ್ಲೆಂದರಲ್ಲಿ ಕಸ ಎಸೆಯುವ ಪುನರಾವರ್ತಿತ ಅಪರಾಧಿಗಳಿಗೆ 2,000 ರೂ. ದಂಡ ವಿಧಿಸಲು ತೀರ್ಮಾನಿಸಿದ್ದು, ಏಕ–ಬಳಕೆಯ ಪ್ಲಾಸ್ಟಿಕ್‌ನಲ್ಲಿ ಎಲ್ಲೆಂದರಲ್ಲಿ ಕಸ ಎಸೆಯುವವರಿಗೆ ಕನಿಷ್ಠ 2,000 ರೂ. ದಂಡ ವಿಧಿಸಲು ತನ್ನ ಸಿಬ್ಬಂದಿಗೆ ಅಧಿಕಾರ ನೀಡಿದೆ.

## ಓದುಗರ ಅನಿಸಿಕೆ...




**ನಮಗೆ ವಿಷಯವಾಗಿದೆ :** ನಮ್ಮ ರಾಜ್ಯದಲ್ಲಿನ ಅನೇಕ ಪಟ್ಟಣ ಸಹಕಾರ ಬ್ಯಾಂಕುಗಳು ಆರ್‌ಬಿಐ ಪದೇ ಪದೇ ನೀಡುವ ಕಠಿಣ ನಿರ್ದೇಶನವನ್ನು ಪಾಲಿಸಿಕೊಂಡು ಗಟ್ಟಿಯಾಗಿ ನೆಲೆ ನಿಂತಿರುವುದು ಮಾತ್ರವಲ್ಲ, ಶೂನ್ಯ ಅನುತ್ಪಾದಕ ಸಾಲಗಳನ್ನು ಹೊಂದಿದ್ದು ಉತ್ತಮ ಠೇವಣಿ ಸಂಗ್ರಹಣೆಯೊಂದಿಗೆ, ಆರ್ಥಿಕ ಪ್ರಗತಿಯಲ್ಲಿ ವೇಗವಾಗಿ ಹೆಜ್ಜೆ ಹಾಕುತ್ತಿರುವುದು ಹೆಮ್ಮೆಯ ಸಹಕಾರಿಗಳಾದ ನಮಗೆ ವಿಷಯವಾಗಿದೆ.

▶▶ **ಎಂ. ರೇಣುಕಾ ಮಲ್ಲಪ್ಪ, ತುಮಕೂರು**

**ಕಾದು ನೋಡಬೇಕಿದೆ :** ಸೆಪ್ಟೆಂಬರ್ 22 ರಿಂದ ಜಾರಿಗೆ ಬರಲಿರುವ ಶೇ.5 ಮತ್ತು 18 ದರಗಳೊಂದಿಗೆ ಸರಳೀಕೃತ ಎರಡು ಹಂತದ ತೆರಿಗೆ ರಚನೆಗೆ ಜಿಎಸ್‌ಟಿ ಕೌನ್ಸಿಲ್ ಅನುಮೋದನೆ ನೀಡಿದ್ದು, ತೆರಿಗೆಯಲ್ಲಿನ ಈ ಸುಧಾರಣೆ ಕ್ರಮಗಳನ್ನು ಸಾಮಾನ್ಯ ಜನರನ್ನು ಕೇಂದ್ರೀಕರಿಸಿ ಕೈಗೊಳ್ಳಲಾಗಿದೆ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ಯಾವುದಕ್ಕೂ ಸೆಪ್ಟೆಂಬರ್ 22ರ ತನಕ ಕಾದು ನೋಡಬೇಕಿದೆ.

▶▶ **ಎಲ್. ಅನಂತ್ ಭಂಡಾರಿ, ಮಂಗಳೂರು**

ಸಂಪಾದಕರು :
**ಪುಂಡಲೀಕ ಎನ್. ಕೇರೂರೆ,**
ಮುಖ್ಯಕಾರ್ಯನಿರ್ವಹಣಾಧಿಕಾರಿ,
ಕರ್ನಾಟಕ ರಾಜ್ಯ ಪಟ್ಟಣ ಸಹಕಾರ
ಬ್ಯಾಂಕುಗಳ ಮಹಾಮಂಡಳ ನಿ.,
ಬೆಂಗಳೂರು.

**ಇವರಿಗೆ,**

Edited, Published and printed by Pundalik N. Kerure, C.E.O. on behalf of the
Karnataka State Co-operative Urban Banks Federation Ltd., Bangalore - 560027.
Published at : # 132, K.H. Road, Bangalore - 560027.
Printed at : Navarathna Printers, #35, 3rd Cross, Sudhamanagar, Bangalore - 560027.